# ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ.

**ಸಿ.ಸಿ ನಂಃ 288/ 2020**

| | | |
|---|---|---|
| ಸಾಕ್ಷಿಯ ಹೆಸರುಃ | ಶ್ರೀ ಚಂದ್ರಪ್ಪ | ಫ್ರಾಸಾಃ **05** |
| ತಂದೆ/ಗಂಡನ ಹೆಸರುಃ | ಮಲ್ಲಪ್ಪ | ಚಾಸಾಃ **03** |
| ವಯಸ್ಸುಃ | **45** ವರ್ಷ | ದಿಃ **17-12-2025** |
| ಉದ್ಯೋಗಃ | ಒಕ್ಕಲುತನ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಚಪೆಟ್ಲಾ ಗ್ರಾಮ | |

ಸಾಕ್ಷಿ ತಮಗೆ ತೆಲುಗು ಭಾಷೆ ಬರುತ್ತದೆ ಎಂದು ಹೇಳಿದ್ದರಿಂದ ಶ್ರೀ ವಿ. ಎಂ. ಆರ್ ವಕೀಲರನ್ನು ಅನುವಾದಕರರನ್ನಾಗಿ ನೇಮಿಸಿಕೊಂಡು ಪ್ರಮಾಣ ವಚನ ಭೋದಿಸಲಾಯಿತು.

<u>ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ</u>

ನನಗೆ ಚಾಸಾಃ 2 ರವರ ಪರಿಚಯ ಇದೆ. ನನಗೆ ಆರೋಪಿಯ ಪರಿಚಯ ಇದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಸಾಕ್ಷಿಯು ನಿಪಿ-2 ರ ಮತ್ತು ನಿಪಿ-5 ರ ಪಂಚನಾಮೆಯಲ್ಲಿನ ತಮ್ಮ ಹೆಬ್ಬಟ್ಟಿನ ಗುರುತುಗಳನ್ನು ಈಗ ನೋಡಿ ಗುರುತಿಸಿರುತ್ತಾರೆ, ಪಂಚನಾಮೆಯಲ್ಲಿ ಬರೆದ ವಿಷಯಗಳ ಬಗ್ಗೆ ನನಗೆ ಮಾಹಿತಿ ಇಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಹಾಗೂ ಯಾವುದೇ ವಸ್ತು ಜಪ್ತಿ ಮಾಡಿಕೊಂಡಿಲ್ಲ.

( ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದರು - ಅನುಮತಿ ನೀಡಲಾಯಿತು)

<u>ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ</u>

ದಿಃ 24-03-2020 ರಂದು ಪೋಲಿಸರು ನನ್ನನ್ನು ಮತ್ತು ಚಾಸಾ-2 ರವರನ್ನು ಪಂಚರನ್ನಾಗಿ ಕರೆದುಕೊಂಡು ಆರೋಪಿಯ ಮನೆಯ ಮುಂದೆ ನಿಪಿ-3 ರಂತೆ ಹಾಗೂ ಚಾಸಾ-1 ರವರ ಮನೆಯ ಮುಂದೆ ನಿಪಿ-05 ರಂತೆ ಪಂಚನಾಮೆ ಮಾಡಿ ಸ್ಥಳದಿಂದ ಚಾಸಾ-1 ರವರ ಸೀರೆ ಹಾಗೂ ಕುಬ್ಬಸವನ್ನು ಜಪ್ತಿ ಮಾಡಿಕೊಂಡಿದ್ದರು ಎಂದರೆ ಸರಿಯಲ್ಲ. ಪಂಚನಾಮೆಯಲ್ಲಿನ ವಿಷಯಗಳನ್ನು ತಿಳಿದುಕೊಂಡು ಅದಕ್ಕೆ ಸಹಿ ಮಾಡಿದ್ದೇನೆ ಎಂದರೆ

ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿತರ ಪರಃ  ವಕೀಲರವರಿಂದಃ</u>

ಆರೋಪಿ ಹಾಗೂ ಅವರ ಪರ ವಕೀಲರು ಗೈರು ಹಾಜರು ಇರುವುದರಿಂದ ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಗಿದೆ.

ಮರುವಿಚಾರಣೆ ಃ ಇರುವುದಿಲ್ಲ.

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

ಓ. ಹೇ. ಕೇ. ಸರಿ ಇದೆ.

ಹೆಚ್ಚುವರಿ  ಜೆಎಂಎಫ್‌ಸಿ ನ್ಯಾಯಾಧೀಶರು
ಯಾದಗಿರಿ.